# ಒಲಿಂಪಿಕ್ಸ್‌ಗೆ ಕ್ರಿಕೆಟ್ ಎಂಟ್ರಿ! ಐಸಿಸಿ–ಐಒಸಿ ಹೊಸ ಅರ್ಹತಾ ನಿಯಮ ಪ್ರಕಟ

**ನವದೆಹಲಿ:** ಸುಮಾರು 128 ವರ್ಷಗಳ ಸುದೀರ್ಘ ವಿರಾಮದ ಬಳಿಕ ಕ್ರಿಕೆಟ್‌ಗೆ ಮತ್ತೆ ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿ ಸ್ಥಾನ ದೊರೆತಿದ್ದು, ವಿಶ್ವದ ಕೋಟ್ಯಂತರ ಕ್ರಿಕೆಟ್ ಅಭಿಮಾನಿಗಳಲ್ಲಿ ಹೊಸ ಸಂಭ್ರಮ ಮನೆ ಮಾಡಿದೆ. 2028ರಲ್ಲಿ ಅಮೆರಿಕದ ಲಾಸ್ ಏಂಜಲೀಸ್‌ನಲ್ಲಿ ನಡೆಯಲಿರುವ ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿ ಟಿ20 ಮಾದರಿಯ ಕ್ರಿಕೆಟ್ ಪಂದ್ಯಾವಳಿಗಳನ್ನು ಆಯೋಜಿಸಲಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಅಂತರರಾಷ್ಟ್ರೀಯ ಕ್ರಿಕೆಟ್ ಮಂಡಳಿ (ಐಸಿಸಿ) ಮತ್ತು ಅಂತರರಾಷ್ಟ್ರೀಯ ಒಲಿಂಪಿಕ್ ಸಮಿತಿ (ಐಒಸಿ) ಜಂಟಿಯಾಗಿ ಅರ್ಹತಾ ನಿಯಮಾವಳಿಗಳನ್ನು ಪ್ರಕಟಿಸಿವೆ.

ಪ್ರಕಟಿತ ನಿಯಮಾವಳಿಗಳ ಪ್ರಕಾರ, ಪುರುಷ ಮತ್ತು ಮಹಿಳಾ ವಿಭಾಗಗಳಲ್ಲಿ ತಲಾ ಆರು ತಂಡಗಳಿಗೆ ಮಾತ್ರ ಒಲಿಂಪಿಕ್ಸ್‌ನಲ್ಲಿ ಭಾಗವಹಿಸುವ ಅವಕಾಶ ದೊರೆಯಲಿದೆ. ಕ್ರಿಕೆಟ್ ಪಂದ್ಯಾವಳಿಗಳು 2028ರ ಜುಲೈ 22ರಿಂದ ಆರಂಭವಾಗಿ ಜುಲೈ 29ರವರೆಗೆ ನಡೆಯಲಿದ್ದು, ಅಂತಿಮ ಪಂದ್ಯವು ಜುಲೈ 29ರಂದು ಆಯೋಜನೆಯಾಗಲಿದೆ ಎಂದು ತಿಳಿದುಬಂದಿದೆ. ಸೀಮಿತ ತಂಡಗಳ ನಡುವೆ ನಡೆಯಲಿರುವ ಈ ಸ್ಪರ್ಧೆ ಅತ್ಯಂತ ಕಠಿಣ ಹಾಗೂ ಸ್ಪರ್ಧಾತ್ಮಕವಾಗಿರಲಿದೆ ಎಂಬ ನಿರೀಕ್ಷೆ ವ್ಯಕ್ತವಾಗಿದೆ.

ಪುರುಷರ ವಿಭಾಗದಲ್ಲಿ ನಾಲ್ಕು ಪ್ರಮುಖ ಖಂಡಗಳಿಂದ ಅಗ್ರ ಶ್ರೇಯಾಂಕ ಪಡೆದ ತಲಾ ಒಂದು ತಂಡಕ್ಕೆ ನೇರ ಅರ್ಹತೆ ನೀಡಲಾಗುತ್ತದೆ. 2026ರ ಡಿಸೆಂಬರ್ 31ರ ವೇಳೆಗೆ ಪ್ರಕಟವಾಗುವ ಐಸಿಸಿ ಟಿ20 ಅಂತರರಾಷ್ಟ್ರೀಯ ಶ್ರೇಯಾಂಕವನ್ನು ಆಧಾರವಾಗಿಟ್ಟುಕೊಂಡು ಏಷ್ಯಾ, ಯುರೋಪ್, ಆಫ್ರಿಕಾ ಮತ್ತು ಓಷಿಯಾನಿಯಾ ಖಂಡಗಳ ಅತ್ಯುತ್ತಮ ತಂಡಗಳು ನೇರವಾಗಿ ಒಲಿಂಪಿಕ್ಸ್‌ಗೆ ಅರ್ಹತೆ ಪಡೆಯಲಿವೆ. ಪ್ರಸ್ತುತ ಕ್ರಿಕೆಟ್ ಶ್ರೇಯಾಂಕ ಮತ್ತು ತಂಡಗಳ ಪ್ರದರ್ಶನವನ್ನು ಪರಿಗಣಿಸಿದರೆ ಭಾರತ, ದಕ್ಷಿಣ ಆಫ್ರಿಕಾ, ಆಸ್ಟ್ರೇಲಿಯಾ ಹಾಗೂ ಇಂಗ್ಲೆಂಡ್ ತಂಡಗಳು ಗ್ರೇಟ್ ಬ್ರಿಟನ್ ಪ್ರತಿನಿಧಿಯಾಗಿ ಈ ಅವಕಾಶ ಪಡೆಯುವ ಸಾಧ್ಯತೆ ಹೆಚ್ಚಿದೆ ಎಂದು ವಿಶ್ಲೇಷಕರು ಅಭಿಪ್ರಾಯಪಟ್ಟಿದ್ದಾರೆ.

ಇದಲ್ಲದೆ, 2028ರ ಒಲಿಂಪಿಕ್ಸ್‌ಗೆ ಆತಿಥ್ಯ ವಹಿಸುತ್ತಿರುವ ಅಮೆರಿಕ ತಂಡಕ್ಕೂ ವಿಶೇಷ ಅವಕಾಶ ಕಲ್ಪಿಸಲಾಗಿದೆ. ಆದರೆ ಈ ಅವಕಾಶ ಪಡೆಯಲು ಅಮೆರಿಕ ತಂಡವು 2026ರ ಜೂನ್ 30ರಿಂದ ಡಿಸೆಂಬರ್ 31ರೊಳಗಿನ ಅವಧಿಯಲ್ಲಿ ಐಸಿಸಿ ಟಿ20 ಶ್ರೇಯಾಂಕದಲ್ಲಿ ಅಗ್ರ 15 ತಂಡಗಳೊಳಗೆ ಸ್ಥಾನ ಪಡೆಯುವುದು ಕಡ್ಡಾಯವಾಗಿದೆ. ಒಂದು ವೇಳೆ ಈ ಅರ್ಹತೆಯನ್ನು ಅಮೆರಿಕ ತಂಡ ಪೂರೈಸಲು ವಿಫಲವಾದರೆ, ಆತಿಥೇಯ ರಾಷ್ಟ್ರದ ವಿಶೇಷ ಕೋಟಾ ಅನ್ವಯಿಸುವುದಿಲ್ಲ ಮತ್ತು ಆ ಸ್ಥಾನವನ್ನು ಅರ್ಹತೆ ಪಡೆದ ಮತ್ತೊಂದು ತಂಡಕ್ಕೆ ನೀಡಲಾಗುತ್ತದೆ ಎಂದು ನಿಯಮಾವಳಿಯಲ್ಲಿ ಸ್ಪಷ್ಟಪಡಿಸಲಾಗಿದೆ.

ಇನ್ನು ಉಳಿದ ಒಂದು ಸ್ಥಾನಕ್ಕಾಗಿ 2027ರಲ್ಲಿ




ವಿಶೇಷ ಜಾಗತಿಕ ಅರ್ಹತಾ ಟೂರ್ನಿಯನ್ನು ಆಯೋಜಿಸಲಾಗುತ್ತದೆ. ಈಗಾಗಲೇ ನೇರ ಅರ್ಹತೆ ಪಡೆದಿರುವ ನಾಲ್ಕು ತಂಡಗಳನ್ನು ಹೊರತುಪಡಿಸಿ ಉಳಿದ ಎಲ್ಲ ಅರ್ಹ ರಾಷ್ಟ್ರಗಳು ಈ ಟೂರ್ನಿಯಲ್ಲಿ ಸ್ಪರ್ಧಿಸಲಿದ್ದು, ಅಂತಿಮವಾಗಿ ವಿಜೇತ ತಂಡಕ್ಕೆ ಲಾಸ್ ಏಂಜಲೀಸ್ ಒಲಿಂಪಿಕ್ಸ್‌ನಲ್ಲಿ ಭಾಗವಹಿಸುವ ಅವಕಾಶ ದೊರೆಯಲಿದೆ.

ವೆಸ್ಟ್ ಇಂಡೀಸ್ ತಂಡಕ್ಕೆ ಸಂಬಂಧಿಸಿದಂತೆ ಐಸಿಸಿ ಮತ್ತು ಐಒಸಿ ವಿಶೇಷ ನಿಯಮವನ್ನು ರೂಪಿಸಿವೆ. ವೆಸ್ಟ್ ಇಂಡೀಸ್ ಒಂದು ಸ್ವತಂತ್ರ ರಾಷ್ಟ್ರವಲ್ಲದೇ, ಹಲವು ಕೆರಿಬಿಯನ್ ರಾಷ್ಟ್ರಗಳ ಒಕ್ಕೂಟವಾಗಿರುವ ಕಾರಣ, ಒಲಿಂಪಿಕ್ಸ್‌ನಲ್ಲಿ ವೆಸ್ಟ್ ಇಂಡೀಸ್ ಹೆಸರಿನಲ್ಲಿ ಸ್ಪರ್ಧಿಸಲು ಅವಕಾಶ ಇರುವುದಿಲ್ಲ. ಒಂದು ವೇಳೆ ವೆಸ್ಟ್ ಇಂಡೀಸ್ ತಂಡವು ಅರ್ಹತೆ ಪಡೆಯುವ ಸ್ಥಾನದಲ್ಲಿದ್ದರೆ, ಅದರ ಸದಸ್ಯ ರಾಷ್ಟ್ರಗಳ ನಡುವೆ ಪ್ರತ್ಯೇಕ ಅರ್ಹತಾ ಟೂರ್ನಿಯನ್ನು ಆಯೋಜಿಸಿ, ಅದರಲ್ಲಿ ವಿಜೇತವಾಗುವ ರಾಷ್ಟ್ರವನ್ನು ಒಲಿಂಪಿಕ್ಸ್‌ಗೆ ಆಯ್ಕೆ ಮಾಡಲಾಗುತ್ತದೆ.

ಮಹಿಳಾ ವಿಭಾಗದಲ್ಲಿಯೂ ಇದೇ ರೀತಿಯ ಅರ್ಹತಾ ವ್ಯವಸ್ಥೆಯನ್ನು ಅನುಸರಿಸಲಾಗುತ್ತದೆ. ನಾಲ್ಕು ಖಂಡಗಳಿಂದ ಅತ್ಯುತ್ತಮ ಪ್ರದರ್ಶನ ನೀಡಿದ ತಂಡಗಳಿಗೆ ನೇರ ಪ್ರವೇಶ ದೊರೆಯಲಿದ್ದು, 2026ರ ಮಹಿಳಾ ಟಿ20 ವಿಶ್ವಕಪ್ ಫಲಿತಾಂಶ ಹಾಗೂ ಐಸಿಸಿ ಶ್ರೇಯಾಂಕದ ಆಧಾರದ ಮೇಲೆ ಭಾರತ, ಆಸ್ಟ್ರೇಲಿಯಾ, ದಕ್ಷಿಣ ಆಫ್ರಿಕಾ ಮತ್ತು ಗ್ರೇಟ್ ಬ್ರಿಟನ್ ತಂಡಗಳು ನೇರ ಅರ್ಹತೆ ಪಡೆಯುವ ಸಾಧ್ಯತೆ ಇದೆ. ಉಳಿದ ಸ್ಥಾನಗಳನ್ನು ಪ್ರತ್ಯೇಕ ಅರ್ಹತಾ ಟೂರ್ನಿಗಳ ಮೂಲಕ ಭರ್ತಿ ಮಾಡಲಾಗುತ್ತದೆ.

ಸುಮಾರು 128 ವರ್ಷಗಳ ಬಳಿಕ ಒಲಿಂಪಿಕ್ಸ್‌ಗೆ ಕ್ರಿಕೆಟ್ ಮರಳುತ್ತಿರುವುದು ಕ್ರೀಡಾ ಲೋಕದ ಐತಿಹಾಸಿಕ ಬೆಳವಣಿಗೆಯಾಗಿದೆ. ಟಿ20 ಮಾದರಿಯಲ್ಲಿ ನಡೆಯಲಿರುವ ಈ ಸ್ಪರ್ಧೆಯು ಕ್ರಿಕೆಟ್‌ಗೆ ಜಾಗತಿಕ ಮಟ್ಟದಲ್ಲಿ ಮತ್ತಷ್ಟು ಜನಪ್ರಿಯತೆ ಮತ್ತು ಮಾನ್ಯತೆ ತಂದುಕೊಡುವ ನಿರೀಕ್ಷೆಯಿದ್ದು, ವಿಶ್ವದ ಪ್ರಮುಖ ಕ್ರಿಕೆಟ್ ರಾಷ್ಟ್ರಗಳು ಈಗಾಗಲೇ ಒಲಿಂಪಿಕ್ಸ್ ಪದಕದ ಕನಸಿನೊಂದಿಗೆ ತಮ್ಮ ಸಿದ್ಧತೆಗಳನ್ನು ಆರಂಭಿಸಿವೆ. 2028ರ ಲಾಸ್ ಏಂಜಲೀಸ್ ಒಲಿಂಪಿಕ್ಸ್‌ನಲ್ಲಿ ಕ್ರಿಕೆಟ್ ಪಂದ್ಯಾವಳಿ ಪ್ರಮುಖ ಆಕರ್ಷಣೆಯಾಗಿ ಹೊರಹೊಮ್ಮುವ ಸಾಧ್ಯತೆ ಇದೆ.

ಕ್ರಿಕೆಟ್ ಕ್ರೀಡೆಯು ಕೊನೆಯದಾಗಿ 1900ರ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಮಾತ್ರ ಸ್ಥಾನ ಪಡೆದಿತ್ತು. ಅಂದು ಕೇವಲ ಎರಡು ತಂಡಗಳ ನಡುವೆ ನಡೆದ ಪಂದ್ಯಾವಳಿಯಲ್ಲಿ ಗ್ರೇಟ್ ಬ್ರಿಟನ್ ಚಿನ್ನದ ಪದಕ ಗೆದ್ದಿತ್ತು. ಅದರ ಬಳಿಕ ಸುಮಾರು 128 ವರ್ಷಗಳ ಕಾಲ ಕ್ರಿಕೆಟ್ ಒಲಿಂಪಿಕ್ಸ್‌ನಿಂದ ಹೊರಗುಳಿದಿತ್ತು. ಇದೀಗ ಟಿ20 ಮಾದರಿಯ ಮೂಲಕ ಮತ್ತೆ ಒಲಿಂಪಿಕ್ಸ್‌ಗೆ ಪ್ರವೇಶ ಪಡೆದಿರುವುದು ಕ್ರಿಕೆಟ್ ಇತಿಹಾಸದಲ್ಲೇ ಮಹತ್ವದ ಮೈಲಿಗಲ್ಲಾಗಿದೆ ಎಂದು ಕ್ರೀಡಾ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಇತ್ತೀಚಿನ ವರ್ಷಗಳಲ್ಲಿ ಟಿ20 ಕ್ರಿಕೆಟ್ ವಿಶ್ವದಾದ್ಯಂತ ಭಾರೀ ಜನಪ್ರಿಯತೆ ಗಳಿಸಿರುವ ಹಿನ್ನೆಲೆಯಲ್ಲಿ, ಒಲಿಂಪಿಕ್ಸ್‌ನಲ್ಲಿ ಈ ಮಾದರಿಯನ್ನು ಸೇರಿಸುವ ನಿರ್ಧಾರಕ್ಕೆ ಐಒಸಿ ಮತ್ತು ಐಸಿಸಿ ಒಪ್ಪಿಗೆ ಸೂಚಿಸಿವೆ. ವಿಶೇಷವಾಗಿ ಅಮೆರಿಕ ಸೇರಿದಂತೆ ಹೊಸ ಮಾರುಕಟ್ಟೆಗಳಲ್ಲಿ ಕ್ರಿಕೆಟ್ ವಿಸ್ತರಣೆಗೆ ಇದು ಮಹತ್ವದ ವೇದಿಕೆಯಾಗಲಿದೆ ಎಂದು ನಿರೀಕ್ಷಿಸಲಾಗಿದೆ. ಒಲಿಂಪಿಕ್ಸ್‌ನಲ್ಲಿ ಕ್ರಿಕೆಟ್ ಸೇರ್ಪಡೆಯಿಂದ ಕ್ರೀಡೆಗೆ ಹೊಸ ಪ್ರೇಕ್ಷಕರನ್ನು ಸೆಳೆಯುವ ಜೊತೆಗೆ ಜಾಗತಿಕ ಮಟ್ಟದಲ್ಲಿ ಇನ್ನಷ್ಟು ಬೆಳವಣಿಗೆಗೆ ಅವಕಾಶ ಸಿಗಲಿದೆ.

ಭಾರತ ಸೇರಿದಂತೆ ಪ್ರಮುಖ ಕ್ರಿಕೆಟ್ ರಾಷ್ಟ್ರಗಳಿಗೆ ಒಲಿಂಪಿಕ್ಸ್ ಪದಕ ಗೆಲ್ಲುವ ಮತ್ತೊಂದು ದೊಡ್ಡ ಅವಕಾಶ ಸಿಕ್ಕಂತಾಗಿದೆ. ಇದುವರೆಗೆ ವಿಶ್ವಕಪ್ ಮತ್ತು ಚಾಂಪಿಯನ್ಸ್ ಟ್ರೋಫಿಗಳಲ್ಲಿ ಮಾತ್ರ ಸ್ಪರ್ಧಿಸುತ್ತಿದ್ದ ಕ್ರಿಕೆಟ್ ತಂಡಗಳು, ಈಗ ಒಲಿಂಪಿಕ್ಸ್ ಪದಕಕ್ಕಾಗಿ ಹೋರಾಡಲಿವೆ. ಇದರಿಂದ ಕ್ರಿಕೆಟ್ ಅಭಿಮಾನಿಗಳಲ್ಲಿ ಈಗಾಗಲೇ ಭಾರೀ ಕುತೂಹಲ ಮೂಡಿದ್ದು, 2028ರ ಲಾಸ್ ಏಂಜಲೀಸ್ ಒಲಿಂಪಿಕ್ಸ್‌ನಲ್ಲಿ ನಡೆಯಲಿರುವ ಕ್ರಿಕೆಟ್ ಪಂದ್ಯಾವಳಿಗಾಗಿ ವಿಶ್ವದ ಕ್ರೀಡಾಭಿಮಾನಿಗಳು ಕಾತರದಿಂದ ಕಾಯುತ್ತಿದ್ದಾರೆ.

## ಬಳ್ಳಾರಿಯಲ್ಲಿ ಜಂಟಿ ಕಾರ್ಯಾಚರಣೆ; 12ಕ್ಕೂ ಹೆಚ್ಚು ಬಾಲ ಕಾರ್ಮಿಕರ ರಕ್ಷಣೆ, ಮಾಲೀಕರ ವಿರುದ್ಧ ಪ್ರಕರಣ ದಾಖಲು!

**ಬಳ್ಳಾರಿ:** ಬಾಲ ಮತ್ತು ಹದಿಹರೆಯದ ಕಾರ್ಮಿಕರನ್ನು ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಜಿಲ್ಲಾಡಳಿತ ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ ಬಳ್ಳಾರಿ ಜಿಲ್ಲೆಯ ವಿವಿಧ ಭಾಗಗಳಿಂದ 12ಕ್ಕೂ ಹೆಚ್ಚು ಬಾಲ ಕಾರ್ಮಿಕರನ್ನು ರಕ್ಷಣೆ ಮಾಡಲಾಗಿದೆ.

ಅಪ್ರಾಪ್ತರನ್ನು ಕೆಲಸಕ್ಕೆ ಬಳಸುತ್ತಿದ್ದ ಅನುಮಾನದ ಮೇರೆಗೆ ಹಲವು ವಾಣಿಜ್ಯ ಸಂಸ್ಥೆಗಳು ಹಾಗೂ ಕೈಗಾರಿಕಾ ಘಟಕಗಳ ಮೇಲೆ ಅಧಿಕಾರಿಗಳು ದಿಢೀರ್ ದಾಳಿ ನಡೆಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ , ಜಿಲ್ಲಾ ಬಾಲ ಕಾರ್ಮಿಕ ಯೋಜನೆ, ಕಂದಾಯ ಇಲಾಖೆ, ಕಾರ್ಮಿಕ ಇಲಾಖೆ, ಶಿಕ್ಷಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳು ಜಂಟಿಯಾಗಿ ಈ ಕಾರ್ಯಾಚರಣೆ ನಡೆಸಿದರು.

ಬಳ್ಳಾರಿ ನಗರ ಸೇರಿದಂತೆ ಜಿಲ್ಲೆಯ ವಿವಿಧ ಭಾಗಗಳಲ್ಲಿರುವ 20ಕ್ಕೂ ಹೆಚ್ಚು ವಾಣಿಜ್ಯ ಸಂಸ್ಥೆಗಳು ಮತ್ತು ಕೈಗಾರಿಕಾ ಘಟಕಗಳನ್ನು ಪರಿಶೀಲಿಸಲಾಯಿತು.ಪರಿಶೀಲನೆ ವೇಳೆ ಬಾಲ ಮತ್ತು ಹದಿಹರೆಯದ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ ಉಲ್ಲಂಘಿಸಿ ವಿವಿಧ ಕೆಲಸಗಳಲ್ಲಿ ತೊಡಗಿಸಲಾಗಿದ್ದ 12ಕ್ಕೂ ಹೆಚ್ಚು ಬಾಲ ಕಾರ್ಮಿಕರನ್ನು ಅಧಿಕಾರಿಗಳು ಪತ್ತೆಹಚ್ಚಿ ರಕ್ಷಿಸಿದರು.

ರಕ್ಷಿಸಲಾದ ಮಕ್ಕಳನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಗಿದ್ದು, ಅವರಿಗೆ ಕೌನ್ಸೆಲಿಂಗ್ ಹಾಗೂ ಪುನರ್ವಸತಿ ಪ್ರಕ್ರಿಯೆ ಆರಂಭಿಸಲಾಗಿದೆ. ಬಳಿಕ ಸಂಬಂಧಿತ ಪ್ರಾಧಿಕಾರದ ಮುಂದೆ ಹಾಜರುಪಡಿಸಿ, ಕುಟುಂಬದವರೊಂದಿಗೆ ಮರುಸೇರ್ಪಡೆಗೊಳಿಸುವ ಹಾಗೂ ಶಿಕ್ಷಣ ಮುಂದುವರಿಸುವ ಕ್ರಮ ಕೈಗೊಳ್ಳಲಾಗುತ್ತಿದೆ. ಶಿಕ್ಷಣ ಇಲಾಖೆ ಅಧಿಕಾರಿಗಳು ಮಕ್ಕಳ ಶೈಕ್ಷಣಿಕ ಸ್ಥಿತಿಯನ್ನು ಪರಿಶೀಲಿಸಿ, ಸಮೀಪದ ಶಾಲೆಗಳಲ್ಲಿ ದಾಖಲಾತಿ ಮಾಡಿಸಲು ಕ್ರಮವಹಿಸಲಿದ್ದಾರೆ ಎಂದು ಜಿಲ್ಲಾಡಳಿತ ತಿಳಿಸಿದೆ.

ಬಾಲ ಕಾರ್ಮಿಕರನ್ನು ಕೆಲಸಕ್ಕೆ ನೇಮಿಸಿಕೊಂಡಿದ್ದ ಮಾಲೀಕರ ವಿರುದ್ಧ ಕಾರ್ಮಿಕ ಇಲಾಖೆ ಪ್ರಕರಣ ದಾಖಲಿಸಿ ಕಾನೂನು ಕ್ರಮ ಆರಂಭಿಸಿದೆ. ಅಪ್ರಾಪ್ತರನ್ನು ನಿಷೇಧಿತ ಉದ್ಯೋಗಗಳಲ್ಲಿ ತೊಡಗಿಸಿಕೊಂಡಿರುವುದು ದೃಢಪಟ್ಟರೆ ಸಂಬಂಧಪಟ್ಟವರಿಗೆ ದಂಡ ಹಾಗೂ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ. ಜಿಲ್ಲೆಯಲ್ಲಿ ಬಾಲ ಕಾರ್ಮಿಕ ಪದ್ಧತಿಯನ್ನು ಸಂಪೂರ್ಣ ನಿರ್ಮೂಲನೆ ಮಾಡುವ ಉದ್ದೇಶದಿಂದ ಇಂತಹ ಜಂಟಿ ಕಾರ್ಯಾಚರಣೆಗಳನ್ನು ಮುಂದುವರಿಸಲಾಗುವುದು ಎಂದು ಜಿಲ್ಲಾಡಳಿತ ತಿಳಿಸಿದೆ.

ಸಾರ್ವಜನಿಕರು ಎಲ್ಲಿಯಾದರೂ ಬಾಲ ಕಾರ್ಮಿಕರನ್ನು ಕಂಡುಬಂದರೆ ಕೂಡಲೇ ಚೈಲ್ಡ್‌ಲೈನ್ ಅಥವಾ ಕಾರ್ಮಿಕ ಇಲಾಖೆಗೆ ಮಾಹಿತಿ ನೀಡಿ ಸಹಕರಿಸುವಂತೆ ಮನವಿ ಮಾಡಲಾಗಿದೆ. ಅಲ್ಲದೆ, ಪ್ರತಿಯೊಬ್ಬ ಮಗುವೂ ಶಾಲೆಯಲ್ಲಿರಬೇಕೇ ಹೊರತು ದುಡಿಮೆಯಲ್ಲಿ ಅಲ್ಲ ಎಂಬ ಅರಿವು ಮೂಡಿಸುವಲ್ಲಿ ಪೋಷಕರು ಹಾಗೂ ಉದ್ಯೋಗದಾತರು ಸರ್ಕಾರದೊಂದಿಗೆ ಕೈಜೋಡಿಸಬೇಕು ಎಂದು ಅಧಿಕಾರಿಗಳು ಮನವಿ ಮಾಡಿದ್ದಾರೆ.

ಜಿಲ್ಲೆಯಲ್ಲಿ ಬಾಲ ಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲಿಯೂ ಇದೇ ರೀತಿಯ ದಿಢೀರ್ ಜಂಟಿ ಕಾರ್ಯಾಚರಣೆಗಳನ್ನು ಮುಂದುವರಿಸಲಾಗುವುದು ಎಂದು ಜಿಲ್ಲಾಡಳಿತ ಸ್ಪಷ್ಟಪಡಿಸಿದೆ. ಪ್ರತಿಯೊಬ್ಬ ಮಗುವಿಗೂ ಶಿಕ್ಷಣ ಮತ್ತು ಸುರಕ್ಷಿತ ಬಾಲ್ಯ ಸಿಗುವುದು ಮೂಲಭೂತ ಹಕ್ಕಾಗಿದ್ದು, ಅದನ್ನು ಕಸಿದುಕೊಳ್ಳುವವರ ವಿರುದ್ಧ ಯಾವುದೇ ಮುಲಾಜಿಲ್ಲದೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

ಬಾಲ ಕಾರ್ಮಿಕ ಪದ್ಧತಿ ಮಕ್ಕಳ ಭವಿಷ್ಯವನ್ನು ಹಾಳು ಮಾಡುವ ಸಾಮಾಜಿಕ ಪಿಡುಗಾಗಿದ್ದು, ಇದನ್ನು ನಿರ್ಮೂಲನೆ ಮಾಡಲು ಸರ್ಕಾರದ ಜೊತೆಗೆ ಸಾರ್ವಜನಿಕರು, ಪೋಷಕರು ಹಾಗೂ ಉದ್ಯೋಗದಾತರು ಸಹ ಜವಾಬ್ದಾರಿಯುತವಾಗಿ ವರ್ತಿಸಬೇಕಾಗಿದೆ ಎಂದು ಅಧಿಕಾರಿಗಳು ಅಭಿಪ್ರಾಯಪಟ್ಟಿದ್ದಾರೆ. ಮಕ್ಕಳನ್ನು ಶಿಕ್ಷಣದಿಂದ ದೂರವಿಟ್ಟು ದುಡಿಮೆಗೆ ಬಳಸುವವರ ವಿರುದ್ಧ ಕಠಿಣ ಕ್ರಮ ಮುಂದುವರಿಯಲಿದೆ ಎಂದು ಅವರು ತಿಳಿಸಿದ್ದಾರೆ.

ರಕ್ಷಿಸಲಾದ ಮಕ್ಕಳಿಗೆ ಶಿಕ್ಷಣ, ಪುನರ್ವಸತಿ ಮತ್ತು ಮಾನಸಿಕ ಬೆಂಬಲ ಒದಗಿಸುವ ಮೂಲಕ ಅವರನ್ನು ಮುಖ್ಯವಾಹಿನಿಗೆ ಕರೆತರುವ ಕಾರ್ಯಕ್ಕೆ ಜಿಲ್ಲಾಡಳಿತ ಆದ್ಯತೆ ನೀಡುತ್ತಿದೆ. ಬಾಲ ಕಾರ್ಮಿಕ ಪದ್ಧತಿಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಸಾರ್ವಜನಿಕ ಸಹಕಾರ ಅತ್ಯಗತ್ಯವಾಗಿದ್ದು, ಜಿಲ್ಲೆಯಾದ್ಯಂತ ಜಾಗೃತಿ ಕಾರ್ಯಕ್ರಮಗಳನ್ನೂ ಹಮ್ಮಿಕೊಳ್ಳಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

"ಮಕ್ಕಳು ಶಾಲೆಯಲ್ಲಿರಬೇಕು, ಕೆಲಸದ ಸ್ಥಳದಲ್ಲಲ್ಲ" ಎಂಬ ಧ್ಯೇಯದೊಂದಿಗೆ ಜಿಲ್ಲಾಡಳಿತ ಮತ್ತು ಸಂಬಂಧಿತ ಇಲಾಖೆಗಳು ನಿರಂತರ ಕಾರ್ಯಾಚರಣೆ ನಡೆಸುತ್ತಿವೆ. ಯಾವುದೇ ಕಾರಣಕ್ಕೂ ಮಕ್ಕಳನ್ನು ದುಡಿಮೆಗೆ ಬಳಸುವುದು ಕಾನೂನುಬಾಹಿರವಾಗಿದ್ದು, ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಸಮಾಜದ ಎಲ್ಲ ವರ್ಗದ ಜನರು ಕೈಜೋಡಿಸಬೇಕು ಎಂದು ಅಧಿಕಾರಿಗಳು ಮನವಿ ಮಾಡಿದ್ದಾರೆ.

## ಮೂರೂವರೆ ವರ್ಷದ ಮಗು ಮೇಲೆ ಅತ್ಯಾಚಾರ ಎಸಗಿ ಹತ್ಯೆ: ಅಪರಾಧಿಗೆ ಮರಣದಂಡನೆ



**ಮುಂಬೈ:** ಮಹಾರಾಷ್ಟ್ರದ ನಸ್ರಾಪುರ ಗ್ರಾಮದಲ್ಲಿ ಮೂರುವರೆ ವರ್ಷದ ಬಾಲಕಿಯನ್ನು ಅಪಹರಿಸಿ ಅತ್ಯಾಚಾರ ಎಸಗಿ ಹತ್ಯೆ ಮಾಡಿದ್ದ 65 ವರ್ಷದ ಅಪರಾಧಿಗೆ ಪುಣೆಯ ವಿಶೇಷ ನ್ಯಾಯಾಲಯ ಮರಣದಂಡನೆ ವಿಧಿಸಿದೆ.

ಭೀಮರಾವ್ ಕಾಂಬ್ಳೆ (65) ಶಿಕ್ಷೆಗೆ ಗು–ರಿಯಾದ ಅಪರಾಧಿ. ಈತ ಮೇ 1ರಂದು ಮೂರುವರೆ ವರ್ಷದ ಬಾಲಕಿಯನ್ನು ಅಪಹರಿಸಿ, ಆಕೆಯ ಮೇಲೆ ಕ್ರೂರವಾಗಿ ಅತ್ಯಾಚಾರ ಎಸಗಿ ಹತ್ಯೆ ಮಾಡಿದ್ದ. ಈ ಅಮಾನವೀಯ ಕೃತ್ಯವು ಮಹಾರಾಷ್ಟ್ರ ಸೇರಿದಂತೆ ದೇಶಾದ್ಯಂತ ವ್ಯಾಪಕ ಆಕ್ರೋಶ ಮತ್ತು ಪ್ರತಿಭಟನೆಗಳಿಗೆ ಕಾರಣವಾಗಿತ್ತು. ಬಾಲಕಿಂ–ರು ಕುಟುಂಬಕ್ಕೆ ನ್ಯಾಯ ಒದಗಿಸಬೇಕು ಹಾಗೂ ಅಪರಾಧಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಸಾರ್ವಜನಿಕರು ಮತ್ತು ವಿವಿಧ ಸಂಘಟನೆಗಳು ಆಗ್ರಹಿಸಿದ್ದವು.

ಪ್ರಕರಣದ ವಿಚಾರಣೆ ನಡೆಸಿದ ಪುಣೆಯ ಹೆಚ್ಚುವರಿ ವಿಶೇಷ ನ್ಯಾಯಾಧೀಶ ಎಸ್.ಆರ್. ಸಲುಂಖೆ ಅವರಿದ್ದ ಪೀಠ, ಈ ಪ್ರಕರಣವನ್ನು "ಅಪರೂಪದಲ್ಲಿ ಅಪರೂಪ" (ಖಚಿಡಿ–ಝಣ ಠಜಿ ಖಚಿಡಿಜ) ಪ್ರಕರಣ ಎಂದು ಪರಿಗಣಿಸಿ ಅಪರಾಧಿ ಭೀಮರಾವ್ ಕಾಂಬ್ಳೆಗೆ ಮರಣದಂಡನೆ ವಿಧಿಸಿ ತೀರ್ಪು ನೀಡಿದೆ. ತೀರ್ಪಿನಲ್ಲಿ, ಬಾಲಕಿಯ ಮೇಲಿನ ಕ್ರೂರ ಅತ್ಯಾಚಾರ ಮತ್ತು ಹತ್ಯೆಯನ್ನು ಅತ್ಯಂತ ಘೋರ ಹಾಗೂ ಅಮಾನವೀಯ ಕೃತ್ಯ ಎಂದು ನ್ಯಾಯಾಲಯ ಉಲ್ಲೇಖಿಸಿದೆ.

ಪ್ರಕರಣದ ತ್ವರಿತ ವಿಚಾರಣೆ ನಡೆಸಿದ್ದ ನ್ಯಾಯಾಲಯವು ಜೂನ್ 25ರಂದು ಭೀಮರಾವ್ ಕಾಂಬ್ಳೆಯನ್ನು ತಪ್ಪಿತಸ್ಥ ಎಂದು ಘೋಷಿಸಿತ್ತು. ಅಪರಾಧದ ಗಂಭೀರತೆ, ಕ್ರೌರ್ಯ, ಸಮಾಜದ ಮೇಲೆ ಬೀರುವ ಪರಿಣಾಮ ಹಾಗೂ ಅಪರಾಧಿಯ ಉದ್ದೇಶವನ್ನು ಪರಿಗಣಿಸಿದ ನ್ಯಾಯಾಲಯ, ಈ ಪ್ರಕರಣದಲ್ಲಿ ಮರಣದಂಡನೆಯೇ ಸೂಕ್ತ ಶಿಕ್ಷೆ ಎಂದು ಅಭಿಪ್ರಾಯಪಟ್ಟಿದೆ. ಮಕ್ಕಳ ವಿರುದ್ಧದ ಘೋರ ಅಪರಾಧಗಳಿಗೆ ಈ ತೀರ್ಪು ಕಠಿಣ ಸಂದೇಶ ರವಾನಿಸಿದ್ದು, ನ್ಯಾಯಾಂಗ ವ್ಯವಸ್ಥೆಯ ಮೇಲೆ ಸಾರ್ವಜನಿಕರ ವಿಶ್ವಾಸವನ್ನು ಮತ್ತಷ್ಟು ಬಲಪಡಿಸಿದೆ.

ಈ ತೀರ್ಪನ್ನು ಬಾಲಕಿಯ ಕುಟುಂಬಸ್ಥರು, ಮಹಿಳಾ ಮತ್ತು ಮಕ್ಕಳ ಹಕ್ಕುಗಳ ಹೋರಾಟಗಾರರು ಸ್ವಾಗತಿಸಿದ್ದು, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಮತ್ತು ಹತ್ಯೆಯಂತಹ ಜಘನ್ಯ ಅಪರಾಧಗಳಿಗೆ ಕಠಿಣ ಶಿಕ್ಷೆ ಅನಿವಾರ್ಯ ಎಂಬ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಇಂತಹ ಪ್ರಕರಣಗಳ ತ್ವರಿತ ತನಿಖೆ ಮತ್ತು ಶೀಘ್ರ ನ್ಯಾಯದಾನವು ಸಮಾಜದಲ್ಲಿ ಭಯದ ವಾತಾವರಣ ನಿರ್ಮಿಸಿ, ಮಹಿಳೆಯರು ಹಾಗೂ ಮಕ್ಕಳ ವಿರುದ್ಧದ ಅಪರಾಧಗಳಿಗೆ ಕಡಿವಾಣ ಹಾಕಲು ಸಹಕಾರಿಯಾಗಲಿದೆ ಎಂದು ಕಾನೂನು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಪ್ರಕರಣದ ತ್ವರಿತ ತನಿಖೆ ಮತ್ತು ಶೀಘ್ರ ವಿಚಾರಣೆಯಿಂದ ಕೇವಲ ಎರಡು ತಿಂಗಳೊಳಗೆ ಅಪರಾಧಿಗೆ ಶಿಕ್ಷೆ ಪ್ರಕಟವಾಗಿರುವುದು ಗಮನಾರ್ಹವಾಗಿದೆ. ಈ ತೀರ್ಪು ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಮತ್ತು ಹತ್ಯೆಯಂತಹ ಜಘನ್ಯ ಅಪರಾಧಗಳಿಗೆ ನ್ಯಾಯಾಂಗವು ಕಠಿಣ ನಿಲುವು ತಾಳುತ್ತಿದೆ ಎಂಬ ಸಂದೇಶವನ್ನು ಸಮಾಜಕ್ಕೆ ರವಾನಿಸಿದ್ದು, ಇಂತಹ ಅಪರಾಧಗಳಿಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ.

## ಐತಿಹಾಸಿಕ 'ಸಿಸ್ಟರ್–ಸಿಟಿ' ಒಪ್ಪಂದಕ್ಕೆ ರಾಜ್ಯ ಸರ್ಕಾರ ಮುಂದು: ಡಿಸಿಎಂ ಡಾ. ಜಿ. ಪರಮೇಶ್ವರ್

**ಬೆಂಗಳೂರು:** ಪೆರು ಗಣರಾಜ್ಯದೊಂದಿಗೆ ಕರ್ನಾಟಕದ ರಾಜತಾಂತ್ರಿಕ, ಆರ್ಥಿಕ ಹಾಗೂ ಸಾಂಸ್ಕೃತಿಕ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ, ಪೆರು ದೇಶದ ರಾಜಧಾನಿ ಲಿಮಾ ಹಾಗೂ ಕರ್ನಾಟಕದ ರಾಜಧಾನಿ ಬೆಂಗಳೂರಿನ ನಡುವೆ ಐತಿಹಾಸಿಕ 'ಸಿಸ್ಟರ್–ಸಿಟಿ' ಒಪ್ಪಂದವನ್ನು ಮಾಡಿಕೊಳ್ಳಲು ರಾಜ್ಯ ಸರ್ಕಾರ ಉತ್ಸುಕವಾಗಿದೆ ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಈ ಒಪ್ಪಂದವು ಉಭಯ ದೇಶಗಳ ನಡುವಿನ ಸಹಕಾರವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲಿದ್ದು, ವ್ಯಾಪಾರ, ಶಿಕ್ಷಣ, ಆರೋಗ್ಯ, ತಂತ್ರಜ್ಞಾನ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಪರಸ್ಪರ ಸಹಯೋಗಕ್ಕೆ ಹೊಸ ಅವಕಾಶಗಳನ್ನು ಸೃಷ್ಟಿಸಲಿದೆ ಎಂದು ಅವರು ಅಭಿಪ್ರಾಯಪಟ್ಟರು.




ಭಾರತ ಮತ್ತು ಪೆರು ನಡುವಿನ 63 ವರ್ಷಗಳ ನಿರಂತರ ರಾಜತಾಂತ್ರಿಕ ಸಂಬಂಧ ಹಾಗೂ ಪೆರು ಗಣರಾಜ್ಯದ 205ನೇ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಭಾನುವಾರ ಆಯೋಜಿಸಲಾಗಿದ್ದ ಉನ್ನತ ಮಟ್ಟದ ರಾಜತಾಂತ್ರಿಕ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಡಾ. ಪರಮೇಶ್ವರ್, ಉಭಯ ರಾಷ್ಟ್ರಗಳ ನಡುವಿನ ಐತಿಹಾಸಿಕ ಸ್ನೇಹ ಸಂಬಂಧವನ್ನು ಸ್ಮರಿಸಿದರು. ಪೆರುವಿನ ಲ್ಯಾಟಿನ್ ಅಮೆರಿಕನ್ ವಿಮೋಚನಾ ಚಳುವಳಿಗಳು ಹಾಗೂ ಮಹಾತ್ಮ ಗಾಂಧಿಯವರ ನೇತೃತ್ವದಲ್ಲಿ ನಡೆದ ಭಾರತದ ಸ್ವಾತಂತ್ರ್ಯ ಹೋರಾಟದ ನಡುವೆ ಹಲವು ಐತಿಹಾಸಿಕ ಸಾಮ್ಯತೆಗಳಿದ್ದು, ಈ ಹೋರಾಟಗಳು ಸ್ವಾತಂತ್ರ್ಯ, ಪ್ರಜಾಪ್ರಭುತ್ವ ಮತ್ತು ಸಾಮಾಜಿಕ ನ್ಯಾಯದ ಮೌಲ್ಯಗಳನ್ನು ಪ್ರತಿಬಿಂಬಿಸುತ್ತವೆ ಎಂದು ಹೇಳಿದರು.

ಕರ್ನಾಟಕ ರಾಜ್ಯವು ಇಂದು ದೇಶದ ಆರ್ಥಿಕ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರವಹಿಸುತ್ತಿದ್ದು, ವಿಶೇಷವಾಗಿ ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನ ಕ್ಷೇತ್ರಗಳಲ್ಲಿ ದೇಶದಲ್ಲೇ ಮುಂಚೂಣಿಯಲ್ಲಿದೆ ಎಂದು ಅವರು ತಿಳಿಸಿದರು. ಭಾರತದ ಐಟಿ ಸಾಫ್ಟ್‌ವೇರ್ ಅಭಿವೃದ್ಧಿ ಮತ್ತು ಜೈವಿಕ ತಂತ್ರಜ್ಞಾನ ಉತ್ಪಾದನೆಯಲ್ಲಿ ಕರ್ನಾಟಕವು ಶೇ. 40ಕ್ಕಿಂತ ಹೆಚ್ಚಿನ ಪಾಲನ್ನು ಹೊಂದಿದ್ದು, ಈ ಕ್ಷೇತ್ರದಲ್ಲಿ ದೇಶದ ಬೆಳವಣಿಗೆಗೆ ಪ್ರಮುಖ ಕೊಡುಗೆ ನೀಡುತ್ತಿದೆ ಎಂದು ಅವರು ವಿವರಿಸಿದರು. ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಜಾಗತಿಕ ಹೂಡಿಕೆದಾರರ ಸಮಾವೇಶಕ್ಕೆ ವಿಶ್ವದ ವಿವಿಧ ರಾಷ್ಟ್ರಗಳಿಂದ ಅಪಾರ ಪ್ರಮಾಣದ ಹೂಡಿಕೆಗಳು ಹರಿದುಬಂದಿದ್ದು, ಕರ್ನಾಟಕವು ಜಾಗತಿಕ ಹೂಡಿಕೆದಾರರ ಪ್ರಮುಖ ತಾಣವಾಗಿ ಹೊರ ಹೊಮ್ಮಿರುವುದಕ್ಕೆ ಇದು ಸಾಕ್ಷಿಯಾಗಿದೆ ಎಂದರು.

ಬೆಂಗಳೂರು ಮತ್ತು ಲಿಮಾ ನಗರಗಳ ನಡುವೆ 'ಸಿಸ್ಟರ್–ಸಿಟಿ' ಒಪ್ಪಂದ ಜಾರಿಯಾದರೆ, ವ್ಯಾಪಾರ, ಹೂಡಿಕೆ, ಶಿಕ್ಷಣ, ಆರೋಗ್ಯ ಸೇವೆಗಳು, ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರಗಳಲ್ಲಿ ನೇರ ಸಹಕಾರಕ್ಕೆ ದಾರಿ ತೆರೆದುಕೊಳ್ಳಲಿದೆ ಎಂದು ಡಾ. ಪರಮೇಶ್ವರ್ ವಿಶ್ವಾಸ ವ್ಯಕ್ತಪಡಿಸಿದರು. ವಿಶೇಷವಾಗಿ ಉನ್ನತ ಶಿಕ್ಷಣ ಸಂಸ್ಥೆಗಳು, ವೈದ್ಯಕೀಯ ಸಂಶೋಧನಾ ಕೇಂದ್ರಗಳು ಹಾಗೂ ಉದ್ಯಮ ವಲಯಗಳ ನಡುವೆ ನೇರ ಸಂಪರ್ಕ ಮತ್ತು ಸಹಯೋಗ ಹೆಚ್ಚಾಗುವ ಮೂಲಕ ಉಭಯ ರಾಷ್ಟ್ರಗಳ ನಡುವಿನ ಸಂಬಂಧ ಮತ್ತಷ್ಟು ಗಟ್ಟಿಯಾಗಲಿದೆ ಎಂದು ಅವರು ಹೇಳಿದರು.

ಪೆರು ದೇಶದೊಂದಿಗೆ ಕೃಷಿ, ಆಹಾರ ಸಂಸ್ಕರಣೆ, ಹಸಿರು ಇಂಧನ, ಪ್ರವಾಸೋದ್ಯಮ, ಗಣಿಗಾರಿಕೆ ಹಾಗೂ ತಂತ್ರಜ್ಞಾನ ಕ್ಷೇತ್ರಗಳಲ್ಲಿಯೂ ಸಹಕಾರ ವೃದ್ಧಿಗೆ ರಾಜ್ಯ ಸರ್ಕಾತತತರ ಆಸಕ್ತಿ ಹೊಂದಿದೆ ಎಂದು ತಿಳಿಸಿದ ಅವರು, ಈ ಸಹಭಾಗಿ–ತ್ವವು ಭವಿಷ್ಯದಲ್ಲಿ ಭಾರತ ಮತ್ತು ಪೆರು ನಡುವಿನ ದ್ವಿಪಕ್ಷೀಯ ವ್ಯಾಪಾರವನ್ನು 10 ಬಿಲಿಯನ್ ಡಾಲರ್ ಮಟ್ಟಕ್ಕೆ ಹೆಚ್ಚಿಸುವ ನಿಟ್ಟಿನಲ್ಲಿ ಮಹತ್ವದ ಪಾತ್ರ ವಹಿಸಲಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಪೆರು ದೇಶದ ರಾಯಭಾರಿ ಜೇವಿಯರ್ ಮ್ಯಾನುಯೆಲ್ ಪೌಲಿನಿಚ್ ವೆಲಾರ್ಡ್, ಬೆಂಗಳೂರಿನಲ್ಲಿರುವ ಪೆರುವಿನ ಗೌರವ ಕಾನ್ಸುಲ್ ವಿಕ್ರಮ್ ವಿಶ್ವನಾಥ್ ಸೇರಿದಂತೆ ಹಲವು ಉನ್ನತ ಅಧಿಕಾರಿಗಳು, ವಿವಿಧ ರಾಷ್ಟ್ರಗಳ ರಾಜತಾಂತ್ರಿಕ ಪ್ರತಿನಿಧಿಗಳು, ಕೈಗಾರಿಕೋದ್ಯಮಿಗಳು ಹಾಗೂ ಉದ್ಯಮ ವಲಯದ ಗಣ್ಯರು ಭಾಗವಹಿಸಿದ್ದರು. ಭಾರತ ಮತ್ತು ಪೆರು ನಡುವಿನ ದೀರ್ಘಕಾಲದ ಸ್ನೇಹ ಸಂಬಂಧವನ್ನು ಮತ್ತಷ್ಟು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಬೆಂಗಳೂರು–ಲಿಮಾ 'ಸಿಸ್ಟರ್–ಸಿಟಿ' ಒಪ್ಪಂದವು ಐತಿಹಾಸಿಕ ಹೆಜ್ಜೆಯಾಗಲಿದ್ದು, ಉಭಯ ರಾಷ್ಟ್ರಗಳ ನಡುವಿನ ಆರ್ಥಿಕ, ಸಾಂಸ್ಕೃತಿಕ ಮತ್ತು ರಾಜತಾಂತ್ರಿಕ ಸಹಕಾರಕ್ಕೆ ಹೊಸ ಅಧ್ಯಾಯವನ್ನು ಬರೆಯಲಿದೆ ಎಂಬ ವಿಶ್ವಾಸವನ್ನು ಈ ಸಂದರ್ಭದಲ್ಲಿ ವ್ಯಕ್ತಪಡಿಸಲಾಯಿತು.

# ಕಾಂಗ್ರೆಸ್ ಸರ್ಕಾರದಿಂದ ಕನ್ನಡಿಗರಿಗೆ ಮತ್ತೊಮ್ಮೆ ಮಹಾದ್ರೋಹ!

## ಕದ್ದುಮುಚ್ಚಿ ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ: ಕಾಂಗ್ರೆಸ್ ವಿರುದ್ಧ ಆರ್. ಅಶೋಕ ಗಂಭೀರ ಆರೋಪ

**ಬೆಂಗಳೂರು:** ರಾಜ್ಯದಲ್ಲಿ ಮುಂಗಾರು ಮಳೆ ಕ್ಷೀಣಿಸುತ್ತಿರುವುದು ಹಾಗೂ ಹಲವು ಜಿಲ್ಲೆಗಳಲ್ಲಿ ಬರದ ಭೀತಿ ಆವರಿಸಿರುವ ಸಂದರ್ಭದಲ್ಲಿ, ಕಾಂಗ್ರೆಸ್ ಸರ್ಕಾರ ಕನ್ನಡಿಗರ ಹಿತಾಸಕ್ತಿಗೆ ವಿರುದ್ಧವಾಗಿ ನಡೆದುಕೊಳ್ಳುತ್ತಿದೆ ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ರಾಜ್ಯ ಸರ್ಕಾರ ಕದ್ದುಮುಚ್ಚಿ ತಮಿಳುನಾಡಿಗೆ ಕಾವೇರಿ ನೀರನ್ನು ಬಿಡುಗಡೆ ಮಾಡುತ್ತಿದ್ದು, ಇದು ಕನ್ನಡಿಗ–ರಿಗೆ ಮಾಡಿದ ಮತ್ತೊಂದು ಮಹಾದ್ರೋಹವಾಗಿದೆ ಎಂದು ಅವರು ಆರೋಪಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಸರಣಿ ಪೋಸ್ಟ್‌ಗಳನ್ನು ಹಂಚಿಕೊಂಡಿರುವ ಅವರು, ರಾಜ್ಯ ಸರ್ಕಾರದ ಕ್ರಮವನ್ನು ತೀವ್ರವಾಗಿ ಖಂಡಿಸಿದ್ದಾರೆ.



ರಾಜ್ಯದ ಹಲವು ಭಾಗಗಳಲ್ಲಿ ಮುಂಗಾರು ಮಳೆ ಕೊರತೆಯಿಂದ ಕೃಷಿ ಚಟುವಟಿಕೆಗಳು ಸಂಕಷ್ಟಕ್ಕೆ ಸಿಲುಕುವ ಭೀತಿ ಎದುರಾಗಿದೆ. ಅದರಲ್ಲೂ ರಾಜಧಾನಿ ಬೆಂಗಳೂರಿನಲ್ಲಿ ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಮತ್ತಷ್ಟು ಗಂಭೀರವಾಗುವ ಸಾಧ್ಯತೆಗಳ ಬಗ್ಗೆ ತಜ್ಞರು ಆತಂಕ ವ್ಯಕ್ತಪಡಿಸುತ್ತಿರುವ ನಡುವೆಯೇ, ರಾಜ್ಯ ಸರ್ಕಾರ ಕಾವೇರಿ ನೀರನ್ನು ತಮಿಳುನಾಡಿಗೆ ಹರಿಸುತ್ತಿರುವುದು ಅತ್ಯಂತ ಖಂಡನೀಯ ಸಂಗತಿಯಾಗಿದೆ ಎಂದು ಆರ್. ಅಶೋಕ ಹೇಳಿದ್ದಾರೆ. ರಾಜ್ಯದ ಜನರು ಹನಿ ನೀರಿಗಾಗಿ ಪರದಾಡುವ ಪರಿಸ್ಥಿತಿ ನಿರ್ಮಾಣವಾಗುವ ಮುನ್ನವೇ ಸರ್ಕಾರ ರಾಜ್ಯದ ನೀರಿನ ಭದ್ರತೆಯನ್ನು ಖಚಿತಪಡಿಸಬೇಕಿತ್ತು. ಆದರೆ ಕಾಂಗ್ರೆಸ್ ಸರ್ಕಾರ ಜನರ ಸಮಸ್ಯೆಗಳ ಬಗ್ಗೆ ಕಾಳಜಿ ವಹಿಸುವ ಬದಲು, ಬೇರೆ ರಾಜ್ಯಗಳ ಹಿತಾಸಕ್ತಿಗೆ ಆದ್ಯತೆ ನೀಡುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

ಕುಡಿಯುವ ನೀರಿನ ನೆಪವೊಡ್ಡಿ, ಕಾವೇರಿ ಕೊಳ್ಳದ ಜೀವನಾಡಿಯಾಗಿರುವ ಕೃಷ್ಣರಾಜ ಸಾಗರ (ಕೆಆರ್‌ಎಸ್) ಅಣೆಕಟ್ಟಿನಿಂದ ಕಳೆದ ಮೂರು ದಿನಗಳಿಂದ ಪ್ರತಿನಿತ್ಯ ಸುಮಾರು 2,000 ಕ್ಯೂಸೆಕ್ ನೀರನ್ನು ತಮಿಳುನಾಡಿಗೆ ಬಿಡುಗಡೆ ಮಾಡಲಾಗುತ್ತಿದೆ ಎಂದು ಅವರು ಆರೋಪಿಸಿದ್ದಾರೆ. ಈ ಬೆಳವಣಿಗೆ ರಾಜ್ಯದ ಜನರಲ್ಲಿ ಆತಂಕ ಉಂಟುಮಾಡಿದ್ದು, ನೀರಿನ ಕೊರತೆಯ ಭೀತಿ ಎದುರಿಸುತ್ತಿರುವ ಸಂದರ್ಭದಲ್ಲಿ ಈ ಕ್ರಮ ಎಷ್ಟು ನ್ಯಾಯಸಮ್ಮತ ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದ್ದಾರೆ. ರಾಜ್ಯದ ರೈತರು ಬೆಳೆಗಾಗಿ ಹಾಗೂ ನಗರ ಪ್ರದೇಶದ ಜನರು ಕುಡಿಯುವ ನೀರಿಗಾಗಿ ಹೋರಾಡುತ್ತಿರುವ ಸಂದರ್ಭದಲ್ಲಿ ತಮಿಳುನಾಡಿಗೆ ನೀರು ಹರಿಸುವುದು ಕನ್ನಡಿಗರ ಬೆನ್ನಿಗೆ ಚೂರಿ ಹಾಕಿದಂತಾಗಿದೆ ಎಂದು ಅವರು ಕಿಡಿಕಾರಿದ್ದಾರೆ.

ಕಾಂಗ್ರೆಸ್ ಪಕ್ಷದ ರಾಜಕೀಯ ನಿಲುವಿನ ವಿರುದ್ಧ ವಾಗ್ದಾಳಿ ನಡೆಸಿರುವ ಆರ್. ಅಶೋಕ, ಅಧಿಕಾರದಲ್ಲಿಲ್ಲದಾಗ "ನಮ್ಮ ನೀರು, ನಮ್ಮ ಹಕ್ಕು" ಎಂಬ ಘೋಷಣೆಗಳ ಮೂಲಕ ಜನರ ಭಾವನೆಗಳನ್ನು ಕೆರಳಿಸುವ ಕಾಂಗ್ರೆಸ್, ಅಧಿಕಾರಕ್ಕೆ ಬಂದ ಬಳಿಕ ಅದೇ ವಿಚಾರದಲ್ಲಿ ಸಂಪೂರ್ಣವಾಗಿ ವಿರುದ್ಧ ನಿಲುವು ತಾಳುತ್ತಿದೆ ಎಂದು ಆರೋಪಿಸಿದ್ದಾರೆ. ರಾಜ್ಯದ ಜನರ ಹಿತಾಸಕ್ತಿಗಿಂತ ರಾಜಕೀಯ ಮೈತ್ರಿ ಮತ್ತು ಅಧಿಕಾರದ ಲೆಕ್ಕಾಚಾರವೇ ಕಾಂಗ್ರೆಸ್ ಪಕ್ಷಕ್ಕೆ ಮುಖ್ಯವಾಗಿದೆ ಎಂದು ಅವರು ಟೀಕಿಸಿದ್ದಾರೆ. ತಮಿಳುನಾಡಿನ ರಾಜಕೀಯ ಪಕ್ಷಗಳೊಂದಿಗೆ ಮೈತ್ರಿ ಸಂಬಂಧಗಳನ್ನು ಕಾಪಾಡಿಕೊಳ್ಳುವ ಉದ್ದೇಶದಿಂದಲೇ ಕಾಂಗ್ರೆಸ್ ಸರ್ಕಾರ ಕರ್ನಾಟಕದ ನೀರಿನ ಹಕ್ಕುಗಳ ವಿಚಾರದಲ್ಲಿ ಮೃದು ಧೋರಣೆ ಅನುಸರಿಸುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ನೇರವಾಗಿ ಪ್ರಶ್ನಿಸಿರುವ ಆರ್. ಅಶೋಕ, ಚುನಾವಣೆಗೆ ಮುನ್ನ ಮೇಕೆದಾಟು ಯೋಜನೆ ಹೆಸರಿನಲ್ಲಿ ಪಾದಯಾತ್ರೆ ನಡೆಸಿ ಜನರ ವಿಶ್ವಾಸ ಗಳಿಸಲು ಯತ್ನಿಸಿದ್ದವರು, ಈಗ ರಾಜ್ಯದ ನೀರಿನ ಹಕ್ಕುಗಳ ವಿಚಾರದಲ್ಲಿ ಏಕೆ ಮೌನ ವಹಿಸಿದ್ದಾರೆ ಎಂದು ಪ್ರಶ್ನಿಸಿದ್ದಾರೆ. ಮೇಕೆದಾಟು ಯೋಜನೆಗಾಗಿ ನಡೆಸಿದ ಪಾದಯಾತ್ರೆ ಕೇವಲ ರಾಜಕೀಯ ಲಾಭಕ್ಕಾಗಿ ಮಾಡಿದ ನಾಟಕವಾಗಿತ್ತೇ ಎಂಬ ಅನುಮಾನ ಈಗ ಸಾರ್ವಜನಿಕರಲ್ಲಿ ಮೂಡುತ್ತಿದೆ ಎಂದು ಅವರು ಹೇಳಿದರು. ರಾಜ್ಯದ ಜನರ ನೀರಿನ ಸಮಸ್ಯೆಯನ್ನು ಪರಿಹರಿಸುವಲ್ಲಿ ಸರ್ಕಾರ ವಿಫಲವಾಗಿದ್ದು, ಚುನಾವಣೆ ಸಂದರ್ಭದಲ್ಲಿ ನೀಡಿದ್ದ ಭರವಸೆಗಳು ಕೇವಲ ರಾಜಕೀಯ ತಂತ್ರವಾಗಿದ್ದವು ಎಂಬುದು ಈಗ ಸ್ಪಷ್ಟವಾಗುತ್ತಿದೆ ಎಂದು ಟೀಕಿಸಿದರು.

ಕಾವೇರಿ ಕೊಳ್ಳದ ರೈತರು ನೀರಿನ ಕೊರತೆಯಿಂದ ಸಂಕಷ್ಟಕ್ಕೆ ಸಿಲುಕಿ ಬೆಳೆ ನಷ್ಟ ಅನುಭವಿಸಿದರೆ, ಅದರ ಹೊಣೆಯನ್ನು ಯಾರು ಹೊರುತ್ತಾರೆ ಎಂದು ಅವರು ಪ್ರಶ್ನಿಸಿದ್ದಾರೆ. ಒಂದು ವೇಳೆ ರೈತರು ಆತ್ಮಹತ್ಯೆಗೆ ಶರಣಾದರೆ ಸರ್ಕಾರ ಅವರ ಕುಟುಂಬಗಳಿಗೆ ಏನು ಉತ್ತರ ನೀಡಲಿದೆ ಎಂದು ಅವರು ಕೇಳಿದ್ದಾರೆ. ಅದೇ ರೀತಿ, ಬೆಂಗಳೂರಿನ ಜನರು ಟ್ಯಾಂಕರ್ ಮಾಫಿಯಾದ ಕಾಟಕ್ಕೆ ಸಿಲುಕಿ ಕುಡಿಯುವ ನೀರಿಗಾಗಿ ಪರದಾಡುವ ಪರಿಸ್ಥಿತಿ ಬಂದರೆ, ಅದಕ್ಕೂ ಸರ್ಕಾರವೇ ಹೊಣೆಗಾರವಾಗಲಿದೆ ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

ರಾಜ್ಯದ ಜನರ ಹಿತಾಸಕ್ತಿಯನ್ನು ಕಾಪಾಡುವುದು ಯಾವುದೇ ಸರ್ಕಾರದ ಮೊದಲ ಕರ್ತವ್ಯವಾಗಿದ್ದು, ಕನ್ನಡಿಗರ ನೀರಿನ ಹಕ್ಕುಗಳನ್ನು ರಕ್ಷಿಸುವಲ್ಲಿ ಕಾಂಗ್ರೆಸ್ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಆರ್. ಅಶೋಕ ಆರೋಪಿಸಿದ್ದಾರೆ. ರಾಜ್ಯದ ರೈತರು, ನಾಗರಿಕರು ಮತ್ತು ಕನ್ನಡಪರ ಸಂಘಟನೆಗಳ ಭಾವನೆಗಳಿಗೆ ವಿರುದ್ಧವಾಗಿ ನಡೆದುಕೊಳ್ಳುತ್ತಿರುವ ಸರ್ಕಾರದ ವಿರುದ್ಧ ಜನರು ಸೂಕ್ತ ಸಮಯದಲ್ಲಿ ತಕ್ಕ ಉತ್ತರ ನೀಡಲಿದ್ದಾರೆ. ಕನ್ನಡಿಗರ ಹಿತಾಸಕ್ತಿಯನ್ನು ಕಡೆಗಣಿಸುವ ಯಾವುದೇ ಸರ್ಕಾರವನ್ನು ರಾಜ್ಯದ ಜನತೆ ಕ್ಷಮಿಸುವುದಿಲ್ಲ ಎಂದು ಅವರು ಎಚ್ಚರಿಕೆ ನೀಡಿದ್ದಾರೆ.